ಕರ್ನಾಟಕ ಸರ್ಕಾರ

ಗ್ರಾಅಪ 84 ಜೈಅಯೋ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 11.12.2015.

# ಸುತ್ತೋಲೆ

ವಿಷಯ : **2015-16ನೇ** ಸಾಲಿನ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಪ್ರಗತಿ ವರದಿ ಕುರಿತು.

ಉಲ್ಲೇಖ :
1. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 34 ಜೈಅಯೋ 2015, ದಿನಾಂಕ 04.05.2015.
2. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾ ಅಪ 71 ಜೈಅಯೋ 2015, ದಿನಾಂಕ 14.10.2015.
3. MNRE ರವರ ಪತ್ರ ಸಂಖ್ಯೆ 5-40-/BE, ದಿನಾಂಕ 29.11.2015.

ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ನವ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಮಂತ್ರಾಲಯ, ನವ ದೆಹಲಿರವರ ಮಾರ್ಗಸೂಚಿಯನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿರುವುದು ಸರಿಯಷ್ಟೇ.

2. ಉಲ್ಲೇಖ(1)ರಲ್ಲಿ 2015-16ನೇ ಸಾಲಿಗೆ ಸಂಬಂಧಿಸಿದಂತೆ ಕಾರ್ಯಕ್ರಮದಡಿ **16,000(SC Category** ಸೇರಿದಂತೆ) ಜೈವಾನಿಲ ಸ್ಥಾವರಗಳ ಭೌತಿಕ ಗುರಿಯನ್ನು ಹಂಚಿಕೆ ಮಾಡಿದ್ದು, **ನವೆಂಬರ್ 2015ರ ಅಂತ್ಯಕ್ಕೆ 2640** ಜೈವಾನಿಲ ಸ್ಥಾವರಗಳ ಪ್ರಗತಿ ಸಾಧಿಸಿರುವುದು ಕಾರ್ಯಕ್ರಮದ ಅನುಷ್ಠಾನಕ್ಕೆ ಹಿನ್ನಡೆಯಾಗಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

3. ಪ್ರಸಕ್ತ ಆರ್ಥಿಕ ಸಾಲು ಪೂರ್ಣಗೊಳ್ಳಲು ಕೆಲವೇ ತಿಂಗಳುಗಳು ಮಾತ್ರ ಬಾಕಿ ಇರುವುದರಿಂದ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರವರು ಕೂಡಲೇ ವೈಯಕ್ತಿಕ ಗಮನಹರಿಸಿ, ನಿಗದಿಪಡಿಸಿದ ಗುರಿಗನುಗುಣವಾಗಿ ಕಾರ್ಯಕ್ರಮದಡಿ ಪೂರ್ಣ ಪ್ರಮಾಣದಲ್ಲಿ ಪ್ರಗತಿ ಸಾಧಿಸಲು ಕ್ರಮ ಕೈಗೊಳ್ಳುವುದು.

4. **2015-16ನೇ** ಸಾಲಿನ ಮಾರ್ಚ್ ಅಂತ್ಯಕ್ಕೆ ಸಲ್ಲಿಸಲಾಗುವ ಪ್ರಗತಿ ವರದಿಗಳಲ್ಲಿ ನಮೂದಿಸಲಾಗುವ ಪೂರ್ಣಗೊಂಡ ಜೈವಾನಿಲ ಸ್ಥಾವರಗಳ ಪ್ರಗತಿಯನ್ನು ಮಾತ್ರ ಪರಿಗಣಿಸಲಾಗುವುದು.

5. ಪ್ರತಿ ಜೈವಾನಿಲ ಸ್ಥಾವರದ ಪ್ರಾಥಮಿಕ, ಕಾರ್ಯಚರಣೆ ಮತ್ತು ನಿರ್ವಹಣೆ ಹಂತದವರೆಗೆ ಕಾರ್ಯಕ್ರಮದ ಉಸ್ತುವಾರಿ ನಿರ್ವಹಿಸುತ್ತಿರುವ ಯೋಜನಾ ಅಭಿಯಂತರರೇ ನೇರವಾಗಿ ಹೊಣೆಗಾರರಾಗಿದ್ದು, ಕಾರ್ಯಕ್ರಮದಡಿ ಬಿಡುಗಡೆ ಮಾಡಲಾಗುವ ಕೇಂದ್ರ ಹಾಗೂ ರಾಜ್ಯ ಸಹಾಯಧನದ ಸಮರ್ಪಕ ವಿನಿಯೋಗಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ್‌ನ ಅಭಿವೃದ್ಧಿ ಶಾಖೆ ಹಾಗೂ ಲೆಕ್ಕಾಧಿಕಾರಿ ಶಾಖೆಗಳೊಂದಿಗೆ ಕಾಲಕಾಲಕ್ಕೆ ಸಮನ್ವಯ ಸಾಧಿಸುವುದು.

6. ಉಲ್ಲೇಖ(2)ರ ಸುತ್ತೋಲೆಯಲ್ಲಿನ ಅಂಶಗಳನ್ನು ಪಾಲಿಸುತ್ತಾ / ಮುಂದುವರಿಸುತ್ತಾ ಕಾರ್ಯಕ್ರಮದಡಿ ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆಗೆ ಮಾರ್ಗಸೂಚಿ/ಆದೇಶದನ್ವಯ ನಿಗದಿತ ಅವಧಿಯೊಳಗೆ ವಿನಿಯೋಗಿಸುವುದು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನವನ್ನು ಉದ್ದೇಶಿತ ಯೋಜನೆಗೆ ವಿನಿಯೋಗಿಸದೇ ಬ್ಯಾಂಕ್ ಖಾತೆಯಲ್ಲಿ ಠೇವಣಿ ಇರಿಸತಕ್ಕದ್ದಲ್ಲ.

7. ಉಲ್ಲೇಖಿತ(3)ರ ಪತ್ರದಲ್ಲಿ ನವ ಮತ್ತು ನವೀಕರಿಸಬಹುದಾದ ಮಂತ್ರಾಲಯ, ನವದೆಹಲಿ ರವರು ತಿಳಿಸಲಾದಂತೆ ಕೇಂದ್ರ ಸರ್ಕಾರವು ಆಯಾ ಸಾಲಿನಲ್ಲಿ ಬಿಡುಗಡೆ ಮಾಡಿದ ಸಹಾಯಧನಕ್ಕೆ ಸಂಬಂಧಿಸಿದಂತೆ ಬಡ್ಡಿಯ ವಿವರಗಳನ್ನು ಸಹ ಸಲ್ಲಿಸಬೇಕಾಗಿದೆ. ಇದರಿಂದಾಗಿ ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನವನ್ನು ವ್ಯಪಗತವಾಗದಂತೆ ಕ್ರಮವಹಿಸುವುದು.

8. **2016-17**ನೇ ಸಾಲಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಜೈವಾನಿಲ ಸ್ಥಾವರಗಳ ನಿರ್ಮಾಣದ ಸಾಮರ್ಥ್ಯತೆಗನುಗುಣವಾಗಿ ಜಿಲ್ಲಾ ವಲಯದಡಿ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಒದಗಿಸಿಕೊಳ್ಳುವುದು.

(ಸರ್ಕಾರದ ಪ್ರ.ಕಾ(ಪಂ.ರಾಜ್)ರವರಿಂದ
ಅನುಮೋದಿಸಲ್ಪಟ್ಟಿದೆ)

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
2. ಎಲ್ಲಾ ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ (ಅಭಿವೃದ್ಧಿ)/ಯೋಜನಾ ನಿರ್ದೇಶಕರು / ಮುಖ್ಯ ಲೆಕ್ಕಾಧಿಕಾರಿಗಳು
3. ಎಲ್ಲಾ ಜಿಲ್ಲಾ ಪಂಚಾಯತ್‌ನ ಯೋಜನಾ ಅಭಿಯಂತರರು ಸಗ್ರಾಇಂಕಾ
   ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಅಪಂ ಇಲಾಖೆ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)ರವರ ಆಪ್ತ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ.